ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು -03**

E-Mail Id: adpisvsection@gmail.com

ಸಂ:ಎಸ್1/ವಾ.ಪ./ಖಾ.ಅರ್ಜಿ.ನೋಂ/31/2023-24 ದಿನಾಂಕ:26.10.2023

**ಸುತ್ತೋಲೆ**

**ವಿಷಯ:** ಜನವರಿ-2024ರ ವಾಣಿಜ್ಯ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜನವರಿ-2024ರ ಮಾಹೆಯಲ್ಲಿ ನಡೆಯುವ ವಾಣಿಜ್ಯ ಪರೀಕ್ಷೆಗೆ ಖಾಸಗಿಯಾಗಿ ನೋಂದಣಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ವಾಣಿಜ್ಯ ಪರೀಕ್ಷೆಗಳಾದ ಆಂಗ್ಲ ಮತ್ತು ಕನ್ನಡ ಬೆರಳಚ್ಚು ಪರೀಕ್ಷೆ, ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪರೀಕ್ಷೆಗಳನ್ನು ಖಾಸಗಿಯಾಗಿ ತೆಗೆದುಕೊಂಡು ಪರೀಕ್ಷೆಗೆ ಹಾಜರಾಗಲು ಇಚ್ಛಿಸುವ ಅಭ್ಯರ್ಥಿಗಳು ತಮಗೆ ಹತ್ತಿರವಿರುವ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದಾದರೂ ವಾಣಿಜ್ಯ ಶಿಕ್ಷಣ ಸಂಸ್ಥೆಗಳ ಮೂಲಕ ನಿಗದಿತ ಅರ್ಜಿ ನಮೂನೆ ಹಾಗೂ ನೋಂದಣಿ ಶುಲ್ಕ ರೂ.180-00ಗಳನ್ನು ಪಾವತಿಸಿದ ನೆಫ್ಟ್ ಚಲನ್‌ಗಳೊಂದಿಗೆ ತಮ್ಮ ಪ್ರಸ್ತಾವನೆಗಳನ್ನು ನಿರ್ದೇಶಕರು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03ರವರಿಗೆ ಕಳುಹಿಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳುವುದು. ನೋಂದಣಿ ಪ್ರಮಾಣ ಪತ್ರಗಳನ್ನು (ಎನ್‌ರೋಲ್‌ಮೆಂಟ್ ಸರ್ಟಿಫಿಕೇಟ್) ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರುಗಳಿಂದ ಪಡೆದು, ನಂತರದಲ್ಲಿ ಸಂಸ್ಥೆಯ ಮೂಲಕ ಅರ್ಜಿ ಹಾಗೂ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕವೇ ಪರೀಕ್ಷಾ ಮಂಡಲಿಗೆ ಸಲ್ಲಿಸುವುದು.

| ಕ್ರ.ಸಂ | ವಿವರಗಳು | ದಿನಾಂಕ |
|---|---|---|
| 1 | ನೋಂದಣಿ ಶುಲ್ಕವನ್ನು ಅಭ್ಯರ್ಥಿಗಳಿಂದ ಸ್ವೀಕರಿಸಲು ಪ್ರಾರಂಭದ ದಿನಾಂಕ | 27.10.2023 |
| 2 | ನೋಂದಣಿ ಶುಲ್ಕವನ್ನು ಅಭ್ಯರ್ಥಿಗಳಿಂದ ಸ್ವೀಕರಿಸಲು ಕೊನೆಯ ದಿನಾಂಕ | 15.11.2023 |
| 3 | ನೋಂದಣಿ ಶುಲ್ಕವನ್ನು ನೆಫ್ಟ್ ಚಲನ್ ಮೂಲಕ ಬ್ಯಾಂಕ್‌ಗೆ ಹಣವನ್ನು ತುಂಬುವ ದಿನಾಂಕ | 17.11.2023 |
| 4 | ನೋಂದಣಿ ಅರ್ಜಿ ನಮೂನೆಗಳನ್ನು ಪರೀಕ್ಷಾ ಶುಲ್ಕದೊಂದಿಗೆ ಮಂಡಲಿಗೆ ಕಳುಹಿಸಲು ಕೊನೆಯ ದಿನಾಂಕ | 20.11.2023 |

ಅಭ್ಯರ್ಥಿಗಳು ಖಾಸಗಿ ನೋಂದಣಿ ಶುಲ್ಕವಾಗಿ ರೂ.180-00 ( ಒಂದು ನೂರ ಎಂಭತ್ತು ರೂಪಾಯಿಗಳು ಮಾತ್ರ)ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಮಂಡಲಿಯ ಖಾತೆ ಸಂಖ್ಯೆ: 1261000109019723 IFSC Code: PUNB0126100 ಗೆ ನೆಫ್ಟ್ ಚಲನ್ ಮೂಲಕ ಜಮಾ ಮಾಡುವುದು. ಹಾಗೂ ಚಲನ್ ಪ್ರತಿಯನ್ನು ನಾಮಿನಲ್ ರೋಲ್‌ನೊಂದಿಗೆ ಸಲ್ಲಿಸುವುದು. ನೋಂದಣಿ ಮಾಡಲು ಸಲ್ಲಿಸಬೇಕಾದ ಅರ್ಜಿ ಶುಲ್ಕ ಮತ್ತು ಇತರೆ ಅವಶ್ಯಕವಾದ ದಾಖಲೆಗಳನ್ನು ಹತ್ತಿರವಿರುವ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ವಾಣಿಜ್ಯ ಸಂಸ್ಥೆಯ ಮುಖಾಂತರ ಕಳುಹಿಸತಕ್ಕದ್ದು.

**ಈ ಕೆಳಗೆ ಸೂಚಿಸಿರುವ ಪ್ರಕರಣಗಳಲ್ಲಿ ಮಾತ್ರ ಖಾಸಗಿಯಾಗಿ ಈ ಪರೀಕ್ಷೆಗೆ ನೋಂದಾಯಿಸಲು ಅರ್ಹರಾಗಿರುತ್ತಾರೆ.**

- ➢ ಅಭ್ಯರ್ಥಿಯು ಯಾವುದೇ ಸರ್ಕಾರಿ/ಸ್ಥಳೀಯ ಸಂಸ್ಥೆ/ರಿಜಿಸ್ಟರ್ಡ್ ಖಾಸಗಿ ಸಂಸ್ಥೆಗಳಲ್ಲಿ ಕನಿಷ್ಠ ಮೂರು ವರ್ಷ ಸೇವೆಯನ್ನು ಸಲ್ಲಿಸಿರಬೇಕು.
- ➢ ಖಾಸಗಿಯಾಗಿ ಬೆರಳಚ್ಚು ಅಥವಾ ಶೀಘ್ರಲಿಪಿ ಪ್ರೌಢ ದರ್ಜೆ/ಪ್ರವೀಣ ದರ್ಜೆ ಪರೀಕ್ಷೆಗೆ ಕುಳಿತುಕೊಳ್ಳಲು ಬಯಸುವವರು ಸಂಬಂಧಪಟ್ಟ ವಿಷಯದ ಪ್ರಥಮ ದರ್ಜೆ/ ಪ್ರೌಢದರ್ಜೆ ಪರೀಕ್ಷೆಯನ್ನು ಒಂದು ವರ್ಷ ಮುಂಚಿತವಾಗಿ ಉತ್ತೀರ್ಣ ಮಾಡಿರಬೇಕು.

➢ ಖಾಸಗಿಯಾಗಿ ವಾಣಿಜ್ಯ ಪರೀಕ್ಷೆಗೆ ಕುಳಿತುಕೊಳ್ಳಲು ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮಾರ್ಚ್–2021 ತಿಂಗಳಲ್ಲಿ ಅಥವಾ ಅದಕ್ಕಿಂತ ಮುಂಚಿತವಾಗಿಯೇ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಹಾಗೂ ಅಗತ್ಯ ಪ್ರಮಾಣ ಪತ್ರದ ನಕಲನ್ನು ಲಗತ್ತಿಸುವುದು.

➢ ನೋಂದಣಿ ಮಾಡಿಸಲು ಯಾವ ವಾಣಿಜ್ಯ ಸಂಸ್ಥೆಯ ಮೂಲಕ ನೋಂದಣಿ ಅರ್ಜಿಯನ್ನು ಕಳುಹಿಸಿರುತ್ತಾರೆಯೋ, ಅದೇ ವಾಣಿಜ್ಯ ಸಂಸ್ಥೆಗೆ ಅರ್ಹತೆ ಪಡೆದವರ ನೋಂದಣಿ ಪತ್ರವನ್ನು (ಎನ್‌ರೋಲ್‌ಮೆಂಟ್ ಸರ್ಟಿಫಿಕೇಟ್) ಕಳುಹಿಸಲಾಗುವುದು.

➢ ವಾಣಿಜ್ಯ ಸಂಸ್ಥೆಯ ಪ್ರಾಚಾರ್ಯರು ತಮ್ಮಲ್ಲಿ ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನೇರವಾಗಿ ಸಹಾಯಕ ನಿರ್ದೇಶಕರು(ವಾಣಿಜ್ಯ ವಿಭಾಗ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03 ಈ ವಿಳಾಸಕ್ಕೆ ಕಳುಹಿಸತಕ್ಕದ್ದು.

➢ ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವಾಗ ಮಂಡಲಿಯಿಂದ ನೀಡಲಾದ ನೋಂದಣಿ ಪತ್ರವನ್ನು ನಿಗದಿತ ಕಾಲಂನಲ್ಲಿ ಅಪ್‌ಲೋಡ್ ಮಾಡಬೇಕು.

**(ಹೆಚ್.ಎನ್.ಗೋಪಾಲಕೃಷ್ಣ)**
**ನಿರ್ದೇಶಕರು (ಪರೀಕ್ಷೆಗಳು)**

ಪ್ರತಿಗಳನ್ನು:–

1. ವಿಭಾಗೀಯ ಮಟ್ಟದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಪದನಿಮಿತ್ತ ಸಹನಿರ್ದೇಶಕರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಎಲ್ಲಾ ವಾಣಿಜ್ಯ ಶಾಲೆಗಳ ಪ್ರಾಚಾರ್ಯರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಕಂಪ್ಯೂಟರ್ ಶಾಖೆರವರಿಗೆ ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
4. ಕಚೇರಿ ಪ್ರತಿ.